ಅಂಗನವಾಡಿ ಕಾರ್ಯಕರ್ತೆಯರನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಬಗ್ಗೆ.

1198. ಶ್ರೀ. ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ರಾಜ್ಯದಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು? ಹಾಗೂ ಅವರನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಉದ್ದೇಶ ರಾಜ್ಯ ಸರ್ಕಾರಕ್ಕೆ ಇದೆಯೇ;
ಆ) ಅವರ ಬಹುದಿನದ ಬೇಡಿಕೆಗಳನ್ನು ಈಡೇರಿಸಲು ಇರುವ ತೊಂದರೆಯೇನು ;
ಇ) ಈ ಬಗ್ಗೆ ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;
ಈ) ರಾಜ್ಯ ಸರ್ಕಾರ ಇವರ ಬೇಡಿಕೆಯ ಬಗ್ಗೆ ಯಾವ ನಿರ್ಧಾರಕ್ಕೆ ಬಂದಿರುತ್ತದೆ (ಸಂಪೂರ್ಣ ವಿವರ ನೀಡುವುದು)?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) –

ಅ) - 22113
ಭಾರತ ಸರ್ಕಾರದ ಮಾರ್ಗಸೂಚಿಯಂತೆ ಗೌರವ ಸೇವೆಗೆ ಗೌರವಧನ ನೀಡುತ್ತಿರುವುದರಿಂದ ಇವರನ್ನು ಪಾಯಿಂಗೊಳಿಸುವ ವಿಚಾರ ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿಲ್ಲ.
ಆ) ಇವರ ಬೇಡಿಕೆ ಬಗ್ಗೆ ಕೇಂದ್ರ ಸರ್ಕಾರವೇ ನಿರ್ಣಯ ಕೈಗೊಳ್ಳಬೇಕಾಗಿದೆ.
ಇ) ಈ ಬಗ್ಗೆ ಭಾರದ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ.
ಈ) ಉತ್ತರ ಮೇಲೆ (ಇ) ಯಲ್ಲಿರುವಂತೆ.

ಶಿಗ್ಗಾಂವ್ ತಾಲ್ಲೂಕಿನ ಅಂಗನವಾಡಿ ಕಾರ್ಯಕರ್ತೆಯರ ಕೇಂದ್ರಗಳು

840. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾಂವ್) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಶಿಗ್ಗಾಂವ್ ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಕೇಂದ್ರಗಳನ್ನು ಐ.ಸಿ.ಡಿ.ಎಸ್. ನಿಯಮದನ್ವಯ ಪ್ರಾರಂಭ ಮಾಡುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;
ಆ) ಹಾಗಿದ್ದಲ್ಲಿ, ಸದರಿ ಕೆಲಸಗಳನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) –

ಅ) ಬಂದಿರುತ್ತದೆ
ಆ) 8ನೇ ಪಂಚವಾರ್ಷಿಕ ಯೋಜನೆಯ ಅವಧಿಯಲ್ಲಿ.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯಾಧಿಕಾರಿಗಳು

842. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾವ್) : – ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ಜನ ವೈದ್ಯಾಧಿಕಾರಿಗಳು ಇರಬೇಕೆಂದು ನಿಯಮಾವಳಿ ಇದೆ;
ಆ) ಶಿಗ್ಗಾಂವ್ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬೇಕಿರುವ ವೈದ್ಯಾಧಿಕಾರಿಗಳನ್ನು ಕೂಡಲೇ ನಿಯೋಜಿಸಲಾಗುವುದೇ;
ಇ) ಶಿಗ್ಗಾಂವ್ ತಾಲ್ಲೂಕು ಬಂಕಾಪುರ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸಲಾಗುವುದೇ?